ಇ. ಹಣದ ವ್ಯವಸ್ಥೆ ಆದ ನಂತರ ಈ ಯೋಜನೆಯನ್ನು ಪ್ರಾರಂಭಿಸಲಾಗುವುದು ಉಳಿದಂತೆ ಯಾವುದೇ ತೊಂದರೆಯನ್ನು ನಿರೀಕ್ಷಿಸಿಲ್ಲ.

ಬೆಂಗಳೂರು ನಗರ ಜಿಲ್ಲೆಯ ದಾಸರಹಳ್ಳಿ ನಗರ ಸಭೆ ವ್ಯಾಪ್ತಿಯ ಸ್ಟಾಂಪ್ ಡ್ಯೂಟಿ ಹಣ ಬಿಡುಗಡೆ

1851 (2489) ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ ದಾಸರಹಳ್ಳಿ ನಗರಸಭೆ ವ್ಯಾಪ್ತಿಯಲ್ಲಿ ಸ್ಟಾಂಪ್ ಡ್ಯೂಟಿ ಹಣ ಬಿಡುಗಡೆ ಆಗದೆ ಕುಡಿಯುವ ನೀರಿನ ಹಾಹಾಕಾರ ನಿರ್ಮಾಣ ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ. ಸ್ಟಾಂಪ್ ಡ್ಯೂಟಿ ಹಣ ಬರದ ಕಾರಣ ನಗರಸಭೆಯ ಕಾಮಗಾರಿಗಳು ಕುಂಠಿತವಾಗಿರುವುದು ನಿಜವೇ;

ಇ. ಸರ್ಕಾರ ಮತ್ತು ನಗರಸಭೆ ತಪ್ಪಿನಿಂದಾಗಿ ಸ್ಟಾಂಪ್ ಡ್ಯೂಟಿ ಹಣ ನಿಂತು ಜನಸಾಮಾನ್ಯರಿಗೆ ಆಗುತ್ತಿರುವ ತೊಂದರೆ ನಿವಾರಣೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ. ಇಲ್ಲ

ಆ. ಉದ್ಭವಿಸುವುದಿಲ್ಲ.

ಇ. ಉದ್ಭವಿಸುವುದಿಲ್ಲ. ತೆರಿಗೆ ವಸೂಲಿ ಮಾಡಿ ಜನಸಾಮಾನ್ಯರಿಗೆ ಎಲ್ಲಾ ಸೌಲಭ್ಯಗಳನ್ನು ಒದಗಿಸುವುದು ನಗರಸಭೆಯ ಆದ್ಯ ಕರ್ತವ್ಯವಾಗಿರುತ್ತದೆ.

ಮಂಡ್ಯನಗರದ ಅಭಿವೃದ್ಧಿಗಾಗಿ ಹುಡ್ಕೋ ಸಹಾಯ

1852 (2476) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಮಂಡ್ಯ ನಗರ ಅಭಿವೃದ್ಧಿಗೆ ಹುಡ್ಕೋ ನೆರವಿನಿಂದ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದಲ್ಲಿ ಅದರ ವಿವರಗಳೇನು?

ಆ. ಈ ಕಾಮಗಾರಿಗಳು ಯಾವ ಹಂತದಲ್ಲಿದೆ;

ಇ. ಈ ಕಾಮಗಾರಿಯು ತೀರಾ ಮಂದಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ತುರ್ತಾಗಿ ಪೂರ್ಣಗೊಳಿಸುವ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ; ಈ ಸಂಬಂಧವಾಗಿ ಮಂಡ್ಯ ನಗರಸಭೆ ಮತ್ತು ಜನಪ್ರತಿನಿಧಿಗಳ ಬಳಿ ಒತ್ತಾಯ ಮಾಡುತ್ತಾ ಇರುವುದನ್ನು ಸಹ ಸರ್ಕಾರ ಅರಿತಿದೆಯೇ?

ಈ. ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ. ಹುಡ್ಕೊ ನೆರವಿನೊಂದಿಗೆ ಮಂಡ್ಯ ನಗರದಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ: